ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಕಂಬಳ ಕ್ರೀಡೆಯ ಅಭಿವೃದ್ಧಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

367 (337) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಭಾಗದ ಕಂಬಳ ಜಾನಪದ ಕ್ರೀಡೆಗೆ ಪ್ರೋತ್ಸಾಹ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕಂಬಳ ಕ್ರೀಡೆಗಳು ಜರುಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಂಬಳ ಕ್ರೀಡೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳಿಗೆ ಸರ್ಕಾರ ಯಾವ ಯಾವ ಸೌಲಭ್ಯ ನೀಡುತ್ತಿದೆ;

(ಇ) ಕಂಬಳ ಕ್ರೀಡೆಯ ಕುರಿತು ಯುವ ಜನತೆಯಲ್ಲಿ ಜಾಗೃತಿ ಮೂಡಿಸಿ ಜನಪ್ರಿಯಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕಂಬಳ ಕ್ರೀಡೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳಿಗೆ ತರಬೇತಿ ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಇಲ್ಲವಾದಲ್ಲಿ, ಈ ಕ್ರೀಡೆಯ ಉಳಿವು ಮತ್ತು ಬೆಳವಣಿಗೆಗೆ ಸರ್ಕಾರ ಯಾವ ನಿಲುವು ಕೈಗೊಳ್ಳುತ್ತಿದೆ? (ವಿವರ ನೀಡಿರುವುದು)